## ಕರ್ನಾಟಕ ವಿಧಾನ ಪರಿಷತ್ತು

1 ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 1295
2 ಸದಸ್ಯರ ಹೆಸರು : ಶ್ರೀ ಶರವಣ .ಟಿ.ಎ
3 ಉತ್ತರಿಸುವ ದಿನಾಂಕ : 29-12-2022
4 ಉತ್ತರಿಸುವವರು : ಮುಖ್ಯಮಂತ್ರಿಯವರು

| ಕ್ರ.ಸಂ | ಪ್ರಶ್ನೆ | ಉತ್ತರ |
|---|---|---|
| ಅ | ಗಾಂಧಿ ಬಜಾರ್‌ನಲ್ಲಿ ಸಾವಿರಾರು ಸಂಖ್ಯೆಯಲ್ಲಿ ಬೀದಿ ವ್ಯಾಪಾರಿಗಳು ಬದುಕನ್ನು ರೂಪಿಸಿಕೊಂಡಿದ್ದು, ಇಲ್ಲಿಯ ವ್ಯಾಪಾರ ಪ್ರದೇಶದಲ್ಲಿ ವಾಹನ ಸಂಚಾರ ನಿಷೇಧಿಸಿ ಪಾದಾಚಾರಿ ರಸ್ತೆಗಳನ್ನಾಗಿ ಘೋಷಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು; | ಗಾಂಧಿ ಬಜಾರ್ ಮುಖ್ಯರಸ್ತೆಯಲ್ಲಿ ವಾಹನಗಳ ಸಂಚಾರವನ್ನು ನಿರ್ಬಂಧಿಸುವ ಪ್ರಸ್ತಾವನೆ ಇರುವುದಿಲ್ಲ. ಪಾದಾಚಾರಿಗಳಿಗೆ ಮತ್ತು ಬೀದಿ ವ್ಯಾಪಾರಿಗಳಿಗೆ ಅನುಕೂಲವಾಗುವಂತೆ ಪಾದಚಾರಿ ಮಾರ್ಗವನ್ನು ಅಗಲಗೊಳಿಸಿ ಅಭಿವೃದ್ಧಿಪಡಿಸಲು ಉದ್ದೇಶಿಸಲಾಗಿರುತ್ತದೆ. |
| ಆ | ಈ ರಸ್ತೆಗಳ ರಿಪೇರಿ ಮತ್ತು ಆಧುನೀಕರಣಗೊಳಿಸಲು ಸಮಸ್ಯೆಯಾಗಿದ್ದು, ಸಿಮೆಂಟ್ ರಸ್ತೆ ಮಾಡುವ ಭರದಲ್ಲಿ ರಸ್ತೆ ಬದಿಯಲ್ಲಿ ವ್ಯಾಪಾರಕ್ಕೆ ಅವಕಾಶ ಇಲ್ಲದೆ ವ್ಯಾಪಾರಿಗಳು ತೊಂದರೆ ಅನುಭವಿಸುತ್ತಿದ್ದು, ಸದರಿ ಕಾಮಗಾರಿಯನ್ನು ಡಾಂಬರು ರಸ್ತೆಯನ್ನಾಗಿ ಮಾಡಲು ಕ್ರಮವಹಿಸುವುದೇ; | ಪ್ರಸ್ತುತ DULT ಸಂಸ್ಥೆಯವರು ವಿನ್ಯಾಸ ಗೊಳಿಸಿರುವಂತೆ ಕಾಮಗಾರಿಯನ್ನು ಕೈಗೊಳ್ಳಲಾಗುತ್ತಿದ್ದು, ರಸ್ತೆ ಬದಿಯಲ್ಲಿನ ವ್ಯಾಪಾರಕ್ಕೆ ತೊಂದರೆ ಉಂಟಾಗದಂತೆ ಕಾಮಗಾರಿಗಳನ್ನು ಭಾಗಗಳಾಗಿ ನಿರ್ವಹಿಸಲು ಕ್ರಮ ಕೈಗೊಳ್ಳಲಾಗಿರುತ್ತದೆ. ಅಲ್ಲದೇ, ಟ್ರಾಫಿಕ್ ಪೋಲೀಸ್ ಅಧಿಕಾರಿಗಳ ಸಮನ್ವಯದಿಂದ ಕೆಲಸ ಕೈಗೊಳ್ಳಲಾಗುತ್ತಿದೆ. ಸದರಿ ರಸ್ತೆಯಲ್ಲಿ ವಾಹನಗಳು ಸಂಚಾರ ಮಾಡುವ ಕ್ಯಾರಿಯೇಜ್ ವೇ ಭಾಗಕ್ಕೆ ವೈಟ್ ಟಾಫಿಂಗ್ ಅಳವಡಿಸಲು ಉದ್ದೇಶಿಸಲಾಗಿರುತ್ತದೆ. |
| ಇ | ರಸ್ತೆಗಳ ಫುಟ್‌ಪಾತ್ ಚಿಕ್ಕದಾಗಿದ್ದು ಅಲ್ಲಿ ವ್ಯಾಪಾರಿಗಳಿಗೆ ವ್ಯಾಪಾರ ಮಾಡುವುದು ಕಷ್ಟಕರವಾಗಿರುವುದರಿಂದ ಫುಟ್‌ಪಾತ್ ಅಗಲಗೊಳಿಸಿ ವಿಸ್ತರಿಸಬಹುದಲ್ಲವೇ? | ಸದರಿ ರಸ್ತೆಯ ಫುಟ್‌ಪಾತ್‌ಅನ್ನು ಅಗಲಗೊಳಿಸಿ ಬೀದಿ ಬದಿಯ ವ್ಯಾಪಾರಿಗಳ ಅನುಕೂಲಕ್ಕಾಗಿ ಪ್ಲಾಟ್‌ಪಾರಂ ಮತ್ತು ಇತರ ವ್ಯವಸ್ಥೆಗಳನ್ನು ಕಲ್ಪಿಸಲು ಉದ್ದೇಶಿಸಲಾಗಿದ್ದು, ಕಾಮಗಾರಿಯನ್ನು ನಿರ್ವಹಿಸಲು ಕ್ರಮವಹಿಸಲಾಗುತ್ತಿದೆ. |

**ಸಂಖ್ಯೆ: ನಅಇ 246 ಬಿಬಿಎಲ್ 2022(ಇ)**

(ಬಸವರಾಜ ಬೊಮ್ಮಾಯಿ)
ಮುಖ್ಯಮಂತ್ರಿ.